**SRI DEVARAJ URS ACADEMY OF HIGHER EDUCATION & RESEARCH**

**SRI DEVARAJ URS MEDICAL COLLEGE**

**Tamaka, Kolar**

**UINIVERSITY LIBRARY & LEARNING RESOURCE CENTRE**

Online Newspaper Clipping Service

**Dated, Friday 06th January – 2017**

**Pg.No.04**

ಉದಯವಾಣಿ

# ಪೌರ ಕಾರ್ಮಿಕರಿಗೆ ಆರೋಗ್ಯ ತಪಾಸಣಾ ಶಿಬಿರ

ಕೆಜಿಎಫ್: ನಗರದ ಸೌಂದರ್ಯ ಹಾಗೂ ಸ್ವಚ್ಛತೆಯಲ್ಲಿ ತೊಡುಗುವ ಪೌರಕಾರ್ಮಿಕರು ತಮ್ಮ ಆರೋಗ್ಯವನ್ನು ಕಾಪಾಡಿಕೊಳ್ಳಬೇಕು ಎಂದು ನಗರಸಭೆ ಅಧ್ಯಕ್ಷ ರಮೇಶಕುಮಾರಜೈನ್ ಹೇಳಿದರು. ನಗರಸಭೆ ಸಭಾಂಗಣದಲ್ಲಿ ನಗರಸಭೆ, ಆರ್.ಎಲ್.ಜಾಲಪ್ಪ ಆಸ್ಪತ್ರೆ, ನಾರಾಯಣ ಹೃದಯಾಲಯ ಸಂಯುಕ್ತಾಶ್ರಯದಲ್ಲಿ ಪೌರಕಾರ್ಮಿಕರಿಗೆ ಹಮ್ಮಿಕೊಳ್ಳಲಾಗಿದ್ದ ಉಚಿತ ಆರೋಗ್ಯ ತಪಾಸಣಾ ಶಿಬಿರವನ್ನು ಉದ್ಘಾಟಿಸಿ ಮಾತನಾಡಿದರು. ಸಾರ್ವಜನಿಕರು ಬೆಳಗ್ಗೆ ಏಳುವ ಮುನ್ನ ನಗರವನ್ನು ಸ್ವಚ್ಛವಾಗಿಡುವ ಪೌರಕಾರ್ಮಿಕರು ಪ್ರಾಮಾಣಿಕವಾಗಿ ದುಡಿಯುತ್ತಿದ್ದಾರೆ, ನಿಯಮಿತವಾಗಿ ಪ್ರತಿ 3 ತಿಂಗಳಿಗೊಮ್ಮೆ ತಮ್ಮ ಆರೋಗ್ಯವನ್ನು ತಪಾಸಣೆ ಮಾಡಿಸಿಕೊಂಡರೆ ಅವರ ಆರೋಗ್ಯವೂ ಚೆನ್ನಾಗಿರುತ್ತದೆ. ನಗರಸಭೆಯಿಂದ ನೀಡಲಾಗುವ ಸಲಕರಣೆಗಳನ್ನು ಪೌರ ಕಾರ್ಮಿಕರು ಸದ್ಬಳಕೆ ಮಾಡಿಕೊಳ್ಳಬೇಕು ಎಂದರು.

ನಗರಸಭೆ ಮಾಜಿ ಅಧ್ಯಕ್ಷ ಕೆ.ಸಿ.ಮುರಳಿ ಮಾತನಾಡಿ, ಪೌರಕಾರ್ಮಿಕರಿಗಾಗಿ ಉಚಿತ ಆರೋಗ್ಯ ಶಿಬಿರವನ್ನು ನಡೆಸಲಾಗುತ್ತಿದ್ದು ಇದನ್ನು ಸದ್ಬಳಕೆ ಮಾಡಿಕೊಳ್ಳಬೇಕು ಎಂದರು. ನಗರಸಭೆವತಿಯಿಂದ ಪೌರಕಾರ್ಮಿಕರಿಗೆ ದೊರಕಬೇಕಾದ ಸೌವಲತ್ತುಗಳನ್ನು ನೀಡಲಾಗುವುದು ಎಂದು ಹೇಳಿದರು. ಪೌರಾಯುಕ್ತ ಶ್ರೀಕಾಂತ ಮಾತನಾಡಿ, ಪೌರಕಾರ್ಮಿಕರು ಕೀಳರಿಮೆ ಬದಿಗೊತ್ತಿ ಎಲ್ಲರೊಂದಿಗೆ ಬೆರೆತು ಜೀವನದಲ್ಲಿ ಮುನ್ನಡೆಯಬೇಕು, ನಾವು ನೀವು ಒಂದು ಕುಟುಂಬವಿದ್ದಂತೆ ನಿಮ್ಮ ಕಷ್ಟಗಳನ್ನು ಪರಿಹರಿಸಲು ಪ್ರಾಮಾಣಿಕ ಪ್ರಯತ್ನ ನಡೆಸಲಾಗುವುದು ಎಂದರು. ಉಚಿತ ಆರೋಗ್ಯ ಶಿಬಿರದಲ್ಲಿ ಕೀಲು, ಸೊಂಟ, ಕಣ್ಣು, ಹೃದಯ ಸಂಬಂಧಿ ಕಾಯಿಲೆಗಳ ತಪಾಸಣೆಯನ್ನು ನುರಿತ ತಜ್ಞ ವೈದ್ಯರು ನಡೆಸಿದರು. ಹೆಪಟೈಟಿಸ್ ಬಿ ಲಸಿಕೆಯನ್ನು ಹಾಕಿದರು. ಉಚಿತ ಆರೋಗ್ಯ ಶಿಬಿರದಲ್ಲಿ ನಗರಸಭೆ ಉಪಾಧ್ಯಕ್ಷೆ ಜಯಂತಿ, ನಗರಸಭೆ ಸದಸ್ಯರಾದ ಮಾಣಿಕ್ಯಂ, ಅಶೋಕ, ಗಣೇಶ್, ಮುಕುಂದ, ನಗರಸಭೆ ವ್ಯವಸ್ಥಾಪಕ ನಂಜುಡಸ್ವಾಮಿ, ಸರಸ್ವತಿ, ಜಯಹರಿ, ಅಮರೀಶ್ ಹಾಗೂ ಇತರರು ಹಾಜರಿದ್ದರು.